# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಸಿ.ಪಿ.ವೆಂಕಟೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ವಿರುದ್ಧ ಶಿಸ್ತು ಕ್ರಮ – ಅಂತಿಮ ಆದೇಶ.

**ಓದಲಾಗಿದೆ:-**
1. ಸರ್ಕಾರದ ಅಧಿಸೂಚನೆ ಸಂಖ್ಯೆ ಗ್ರಾಅಪ 49 ಸೇಶಿಕಾ 2015 – ದಿನಾಂಕ 21-02-2015.
2. ಶ್ರೀ ಸಿ.ಪಿ.ವೆಂಕಟೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಲಿಖಿತ ಹೇಳಿಕೆ ದಿನಾಂಕ 21-07-2015

*****

**ಪ್ರಸ್ತಾವನೆ:**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಸ್ಥಳನಿರೀಕ್ಷಣೆಯಲ್ಲಿದ್ದ ಶ್ರೀ ಸಿ.ಪಿ.ವೆಂಕಟೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರನ್ನು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಅಧಿಸೂಚನೆ ದಿನಾಂಕ 21-02-2015ರಲ್ಲಿ ತಾಂತ್ರಿಕ ಸಹಾಯಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಕಾರವಾರ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಲಾಗಿತ್ತು, ಆದರೆ, ಸದರಿ ಅಧಿಕಾರಿಯವರು ಸ್ಥಳನಿಯುಕ್ತಿಗೊಳಿಸಲಾದ ಹುದ್ದೆಯ ಕರ್ತವ್ಯಕ್ಕೆ ಹಾಜರಾಗದೆ ಸರ್ಕಾರದ ಆದೇಶವನ್ನು ಉಲ್ಲಂಘಿಸಿದ ಆರೋಪಕ್ಕೆ ಸಂಬಂಧಿಸಿದಂತೆ ಅವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವ ಸಲುವಾಗಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ-12ರಡಿ ಸದರಿಯವರಿಗೆ ಆರೋಪ ~~ಪಟ್ಟಿಯನ್ನು ದಿನಾಂಕ 27-06-2015ರ ಕಾರಣ ಕೇಳುವ~~ ನೋಟೀಸಿನೊಂದಿಗೆ ಜಾರಿಮಾಡಲಾಗಿತ್ತು.

ಇದಕ್ಕೆ ಪ್ರತಿಯಾಗಿ ಶ್ರೀ ಸಿ.ಪಿ.ವೆಂಕಟೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರು ದಿನಾಂಕ 21-07-2015 ರಂದು ಸಲ್ಲಿಸಿರುವ ಲಿಖಿತ ಹೇಳಿಕೆಯಲ್ಲಿ ಕೌಟುಂಬಿಕ ಕಾರಣಗಳಿಂದಾಗಿ ಹಾಗೂ ರಾಷ್ಟ್ರೀಯ ಹೆದ್ದಾರಿ ವಲಯದ ಸಹಾಯಕ ಇಂಜಿನಿಯರ್ ಹುದ್ದೆಯಿಂದ ತಮ್ಮನ್ನು ಬಿಡುಗಡೆಗೊಳಿಸದ ಕಾರಣದಿಂದಾಗಿ ಸ್ಥಳನಿಯುಕ್ತಿಗೊಳಿಸಿದ ಹುದ್ದೆಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಲು ಸಾಧ್ಯವಾಗಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಶ್ರೀ ಸಿ.ಪಿ.ವೆಂಕಟೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಸಲ್ಲಿಸಿರುವ ಲಿಖಿತ ಹೇಳಿಕೆಯನ್ನು ಸರ್ಕಾರವು ಪರಿಶೀಲಿಸಿದ್ದು, ಸದರಿಯವರು ತಮ್ಮ ಮಗಳು ಬೆಂಗಳೂರಿನಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವುದರಿಂದ ತಾವು ಕಾರವಾರಕ್ಕೆ ಹೋಗಿ ಕೆಲಸ ನಿರ್ವಹಿಸುವುದು ಕಷ್ಟಕರವಾಗಿರುತ್ತದೆ ಎಂದು ದಿನಾಂಕ 3-3-2015ರಂದು ಸಲ್ಲಿಸಿದ ಮನವಿಯಲ್ಲಿ ತಿಳಿಸಿರುವುದನ್ನು ಗಣನೆಗೆ ತೆಗೆದುಕೊಂಡಲ್ಲಿ, ಅವರು ರಾಷ್ಟ್ರೀಯ ಹೆದ್ದಾರಿ ವಲಯದ ಸಹಾಯಕ ಇಂಜಿನಿಯರ್ ಹುದ್ದೆಯ ಕರ್ತವ್ಯದಿಂದ ತಮ್ಮನ್ನು ಬಿಡುಗಡೆಗೊಳಿಸದ ಕಾರಣ ಸ್ಥಳನಿಯುಕ್ತಿಗೊಳಿಸಿದ ಹುದ್ದೆಯ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಲು ಸಾಧ್ಯವಾಗಿಲ್ಲವೆಂಬ ಅಂಶವನ್ನು ಒಪ್ಪಲು ಸಾಧ್ಯವಾಗುವುದಿಲ್ಲ. ಸದರಿಯವರು ಕೌಟುಂಬಿಕ ಕಾರಣಗಳಿಂದಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೇ ಇರುವುದರಿಂದ ಸರ್ಕಾರದ ಆಡಳಿತಾತ್ಮಕ ಕೆಲಸ ಕಾರ್ಯಗಳಿಗೆ ಅಡಚಣೆ ಉಂಟಾಗಿರುವುದು ಸ್ಪಷ್ಟವಾಗುತ್ತದೆ. ಹಾಗಾಗಿ ಶ್ರೀ ಸಿ.ಪಿ.ವೆಂಕಟೇಶ್‌ರವರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಸಂಪೂರ್ಣ ನಿಷ್ಠೆ ಪ್ರದರ್ಶಿಸಿರುವುದಿಲ್ಲ.

ಪು.ತಿ.ನೋ.

ಮೇಲಿನ ವಿವರಗಳನ್ವಯ ಶ್ರೀ ಸಿ.ಪಿ.ವೆಂಕಟೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಸರ್ಕಾರದ ಆದೇಶದ ಅನುಸಾರ ಸ್ಥಳನಿಯುಕ್ತಿಗೊಳಿಸಿದ ಹುದ್ದೆಯಲ್ಲಿ ವರದಿ ಮಾಡಿಕೊಳ್ಳದೇ ಸರ್ಕಾರದ ಆದೇಶವನ್ನು ಉಲ್ಲಂಘಿಸಿ ಕರ್ತವ್ಯಲೋಪ ಎಸಗಿರುವುದು ಸಾಬೀತಾಗಿರುವುದರಿಂದ ಸದರಿಯವರಿಗೆ ದಂಡನೆಯನ್ನು ವಿಧಿಸಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ:

**ಆದೇಶ ಸಂಖ್ಯೆ. ಗ್ರಾಅಪ 110 ಜಿಪಅ 2015, ಬೆಂಗಳೂರು,**
**ದಿನಾಂಕ 11-09-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಸಿ.ಪಿ.ವೆಂಕಟೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಎಸಗಿರುವ ಕರ್ತವ್ಯಲೋಪಕ್ಕೆ ಸಂಬಂಧಿಸಿದಂತೆ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 8 (iv) (a)ರನ್ವಯ ಅವರ ಕಾಲಿಕ ವೇತನ ಶ್ರೇಣಿಯಲ್ಲಿ ಒಂದು ಹಂತವನ್ನು ಸಂಚಿತ ಪರಿಣಾಮ ಹೊಂದದಂತೆ ಒಂದು ವರ್ಷದ ಅವಧಿಯವರೆಗೆ ಕಡಿತಗೊಳಿಸುವ ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ ಪೋತಲಕಟ್ಟಿ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಶ್ರೀ ಸಿ.ಪಿ.ವೆಂಕಟೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಕರ್ನಾಟಕ ಲೋಕಾಯುಕ್ತ ಕಚೇರಿ, ಡಾ: ಬಿ.ಆರ್.ಅಂಬೇಡ್ಕರ್ ವೀಧಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

ಪ್ರತಿ ಮಾಹಿತಿಗಾದಿ:

1. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ).
2. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
3. ಗ್ರಾ.ಅ.ಪಂ.ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ / ಸರ್ಕಾರದ ಕಾರ್ಯದರ್ಶಿ (ಪಂ.ರಾಜ್) / ಅಪರ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರಿಗೆ.
4. ಮಾಹಿತಿ ಕೇಂದ್ರ : ಹೆಚ್ಚುವರಿ ಪ್ರತಿ:ರಕ್ಷಾ ಕಡತ : ಕಂಪ್ಯೂಟರ್ ಸೆಲ್.